ಕರ್ನಾಟಕ ವಿಧಾನ ಪರಿಷತ್ತು

ವಿಧಾನ ಪರಿಷತ್ತ ಸದಸ್ಯರ ಹೆಸರು:	ಶ್ರೀ ಬಿ.ಕೆ.ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು)
ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:	1996 (2365)
ಉತ್ತರಿಸಬೇಕಾದ ದಿನಾಂಕ:	29-03-2021.
ಉತ್ತರಿಸುವ ಸಚಿವರು:	ವೈದ್ಯಕೀಯ ಶಿಕ್ಷಣ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ಶಿವಮೊಗ್ಗ ಜಿಲ್ಲೆಯಲ್ಲಿ ಸರ್ಕಾರಿ ವೈದ್ಯಕೀಯ ಕಾಲೇಜು ನಿರ್ಮಾಣದ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಸರ್ಕಾರಿ ಸ್ವಾಯತ್ತ ಸಂಸ್ಥೆಯಾಗಿದ್ದು, 2007ನೇ ಸಾಲಿನಿಂದ ಪ್ರಾರಂಭಿಸಲಾಗಿರುತ್ತದೆ. ಸದರಿ ಸಂಸ್ಥೆಯು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಹಾಗೂ ಭಾರತೀಯ ವೈದ್ಯಕೀಯ ಪರಿಷತ್ತು, ನವದೆಹಲಿ ಇವರ ಅನುಮತಿಯೊಂದಿಗೆ 2007-08ನೇ ಸಾಲಿನಿಂದ 100 ವಿದ್ಯಾರ್ಥಿಗಳ ಪ್ರವೇಶ ಮಿತಿಯೊಂದಿಗೆ ಪ್ರಾರಂಭಗೊಂಡಿರುತ್ತದೆ. 2017-18ನೇ ಶೈಕ್ಷಣಿಕ ವರ್ಷದಿಂದ 150 ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿಯನ್ನು ನೀಡಲಾಗಿರುತ್ತದೆ. 2011-12ನೇ ಸಾಲಿನಿಂದ ಪ್ರೀ ಹಾಗೂ ಪ್ಯಾರಾ ಕ್ಲಿನಿಕಲ್ ವಿಷಯಗಳಲ್ಲಿ ಸ್ನಾತಕೋತ್ತರ ಪದವಿ ಕೋರ್ಸುಗಳನ್ನು ಪ್ರಾರಂಭಿಸಲಾಗಿರುತ್ತದೆ. 2019-20ನೇ ಸಾಲಿನಲ್ಲಿ ಕ್ಲಿನಿಕಲ್ ವಿಭಾಗಗಳಿಗೂ ಕೂಡ ವಿದ್ಯಾರ್ಥಿಗಳ ಪ್ರವೇಶಾತಿಗೆ ಅನುಮತಿಯನ್ನು ನೀಡಲಾಗಿರುತ್ತದೆ.
ಆ)	ಹಾಗಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? (ಸಂಪೂರ್ಣ ವಿವರ ಒದಗಿಸುವುದು)	ಅನ್ವಯಿಸುವುದಿಲ್ಲ.

ಸಂಖ್ಯೆ: ಎಂಇಡಿ 210 ಎಂಪಿಎಸ್ 2021

(ಡಾ.ಕೆ.ಸುಧಾಕರ್)
ವೈದ್ಯಕೀಯ ಶಿಕ್ಷಣ ಹಾಗೂ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಇಲಾಖಾ ಸಚಿವರು